**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರತಾಪ್‌ಸಿಂಹ ನಾಯಕ್ ಕೆ. ರವರು ನಿಯಮ-72ರ ಅಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ವಿಷಯ:** ರಾಜ್ಯದಲ್ಲಿ ಸೈಬರ್ ಅಪರಾಧ ಪ್ರಕರಣಗಳು ದಿನದಿಂದ ದಿನಕ್ಕೆ ಶರವೇಗದಲ್ಲಿ ಹೆಚ್ಚಾಗುತ್ತಿದ್ದು, ಅಮಾಯಕ ಜನರು ಕೋಟ್ಯಾಂತರ ರೂಪಾಯಿ ಹಣ ಕಳೆದುಕೊಂಡು ವಂಚನೆಗೆ ಒಳಗಾಗುತ್ತಿದ್ದಾರೆ. ಸೈಬರ್ ಕ್ರೈಂ ಪ್ರಕರಣಗಳು ವ್ಯಾಪಕವಾಗಿ ಮತ್ತು ನಿರಂತರವಾಗಿ ನಡೆಯುತ್ತಿದ್ದು, ಅವುಗಳನ್ನು ನಿಯಂತ್ರಣಕ್ಕೆ ತರಲು ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದೆ. ಬಹುತೇಕ ಸೈಬರ್ ಕ್ರೈಂ ಪ್ರಕರಣಗಳಲ್ಲಿ ವಂಚಕರನ್ನು ಪತ್ತೆ ಮಾಡಿ ಅವರಿಂದ ಸಾರ್ವಜನಿಕರು ಕಳೆದುಕೊಂಡಿರುವ ಹಣವನ್ನು ವಶಪಡಿಸಿಕೊಳ್ಳುವುದು ಮರೀಚಿಕೆಯಾಗುತ್ತಿದೆ.

ರಾಜ್ಯದಲ್ಲಿ ವ್ಯಾಪಕವಾಗಿ ನಡೆಯುತ್ತಿರುವ ಸೈಬರ್ ಕ್ರೈಂ ಪ್ರಕರಣಗಳನ್ನು ತಡೆಯಲು ಹಾಗೂ ಅಮಾಯಕರು ಮತ್ತು ಮುಗ್ಧರು ಈ ವಂಚನೆಯ ಜಾಲಕ್ಕೆ ಸಿಲುಕಿ ಸಂಕಷ್ಟಕ್ಕೀಡಾಗುತ್ತಿರುವುದನ್ನು ತಪ್ಪಿಸಲು ಸರ್ಕಾರ ಕಠಿಣ ಕ್ರಮಗಳನ್ನು ಕೈಗೊಳ್ಳದೆ ಕಡೆಗಣಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಗೃಹ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:** ರಾಜ್ಯದಲ್ಲಿ ಸೈಬರ್ ಅಪರಾಧ ಪ್ರಕರಣಗಳು ವರದಿಯಾಗುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಕಳೆದ 3 ವರ್ಷಗಳಲ್ಲಿ ವರದಿಯಾಗಿರುವ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ, ಬಂಧಿಸಲಾಗಿರುವ ಆರೋಪಿಗಳ ಸಂಖ್ಯೆ, ವಂಚನೆಯ ಮೊತ್ತ, ಜಪ್ತಿಪಡಿಸಿಕೊಂಡ ಮೊತ್ತ ಮತ್ತು ಹಿಂದಿರುಗಿಸಲಾಗಿರುವ ವಂಚನೆ ಮೊತ್ತದ ವಿವರಗಳು ಈ ಕೆಳಕಂಡಂತಿದೆ:-

| ವರ್ಷ | ವರದಿಯಾಗಿರುವ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ | ಬಂಧಿತ ಆರೋಪಿಗಳ ಸಂಖ್ಯೆ | ವಂಚನೆಯ ಮೊತ್ತ ರೂ.ಗಳಲ್ಲಿ | ರಿಕವರಿ ಮೊತ್ತ ರೂ.ಗಳಲ್ಲಿ | ಹಿಂದಿರುಗಿಸಿರುವ ವಂಚನೆ ಮೊತ್ತ ರೂ.ಗಳಲ್ಲಿ |
|---|---|---|---|---|---|
| 2023 | 22253 | 1085 | 861,14,02,476 | 172,63,90,417 | 136,05,04,442 |
| 2024 | 22472 | 894 | 2,515,48,49,720 | 346,22,09,274 | 267,70,38,977 |
| 2025 (ಜುಲೈ) | 8620 | 265 | 1,287,50,89,854 | 109,36,47,238 | 4,890,14,780 |

**ಸೈಬರ್ ಪ್ರಕರಣಗಳನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**

ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಜಾಲತಾಣಗಳ ಬಳಕೆಯಿಂದ ಸಾರ್ವಜನಿಕರಲ್ಲಿ ಇಂಟರ್‌ನೆಟ್ ಬಳಕೆ ಹೆಚ್ಚಿದ್ದು, ಇದರ ಪ್ರಯೋಜನವನ್ನು ಪಡೆಯುತ್ತಿರುವ ಸೈಬರ್ ವಂಚಕರು ವಿವಿಧ ಸ್ಥಳಗಳಲ್ಲಿ ಸಾರ್ವಜನಿಕರನ್ನು ವಂಚಿಸುತ್ತಿರುವುದು

ವರದಿಯಾಗುತ್ತಿವೆ. ಈ ಪ್ರಕರಣಗಳನ್ನು ನಿಯಂತ್ರಿಸಿ ಸಾರ್ವಜನಿಕರ ಹಣ ದುರುಪಯೋಗವಾಗದಂತೆ ಮತ್ತು ವಂಚನೆಗೊಳಗಾಗದಂತೆ ಸರ್ಕಾರವು ಮುಂಜಾಗ್ರತೆ ಕ್ರಮ ವಹಿಸಿ, ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ/ಕೈಗೊಳ್ಳಲಾಗುತ್ತಿದೆ.

1. ರಾಜ್ಯದಲ್ಲಿ ಸೈಬರ್ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ಡಿಸೆಂಬರ್ 2021 ರಿಂದ ಕೇಂದ್ರ ಸರ್ಕಾರದ ಗೃಹ ಸಚಿವಾಲಯದ ಸಹಯೋಗದೊಂದಿಗೆ ಎನ್.ಸಿ.ಆರ್.ಪಿ National Cyber Crime Reporting Portal ಸಹಾಯವಾಣಿ ಸಂಖ್ಯೆ 1930 ಸೃಜಿಸಿ ಸದರಿ ವ್ಯವ್ಯಸ್ಥೆಯಡಿ ರಾಜ್ಯದಲ್ಲಿ ವರದಿಯಾಗುತ್ತಿರುವ ದೂರುಗಳಿಗೆ ಸಂಬಂಧಿಸಿದಂತೆ ಆನ್‌ಲೈನ್ ಮುಖಾಂತರ ಅಕ್ರಮ ವರ್ಗಾವಣೆಯಾದ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಲಾಗುತ್ತಿದೆ.
2. ಸೈಬರ್ ವಂಚನೆ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ತನಿಖೆ ಮಾಡಿ ಸಾರ್ವಜನಿಕರಿಗೆ ನಷ್ಟ ತಪ್ಪಿಸುವ ಸಲುವಾಗಿ ರಾಜ್ಯದಲ್ಲಿ ಹೊಸದಾಗಿ 43 ಸೈಬರ್ ಕ್ರೈಂ ಪೊಲೀಸ್ ಠಾಣೆ (CEN)ಗಳನ್ನು ಸೃಜಿಸಲಾಗಿದ್ದು, ಗುಣಮಟ್ಟದ ತನಿಖೆಗಾಗಿ ಡಿವೈ.ಎಸ್.ಪಿ ದರ್ಜೆಯ ಅಧಿಕಾರಿಗಳನ್ನು ಎಸ್.ಹೆಚ್.ಓ ಗಳನ್ನಾಗಿ ನೇಮಕ ಮಾಡಲಾಗಿರುತ್ತದೆ.
3. ರಾಜ್ಯದ ಅಪರಾಧ ತನಿಖಾ ಸಂಸ್ಥೆಯಲ್ಲಿ (CID), ಕೇಂದ್ರ ತರಬೇತಿ ಘಟಕ (Centre for Cyber Crime Investigation, Training and Research) ಅನ್ನು ಸ್ಥಾಪಿಸಿ ಪೊಲೀಸ್ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳಿಗೆ ಸೈಬರ್ ಅಪರಾಧಗಳನ್ನು ಭೇದಿಸಲು ತರಬೇತಿಯನ್ನು ನೀಡಲಾಗುತ್ತಿದೆ.
4. ಪೊಲೀಸ್ ಇಲಾಖೆಯು ಕೇಂದ್ರ ಹಾಗೂ ಸರ್ಕಾರದ ಇತರೆ ಸಹಭಾಗಿತ್ವ ಇಲಾಖೆಗಳಾದ RBI, DOTC, CERT-IN, MHA ಮತ್ತು ಎಲ್ಲಾ ಇತರ ಬ್ಯಾಂಕಿಂಗ್ ಹಾಗೂ ಹಣಕಾಸು ವ್ಯವಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ನಿರಂತರ ಸಂಪರ್ಕದಲ್ಲಿದ್ದು, ಸೈಬರ್ ಅಪರಾಧಗಳಲ್ಲಿ ಭಾಗಿಯಾದ ಬ್ಯಾಂಕ್ ಖಾತೆಗಳ/ಮೊಬೈಲ್ ಸಿಮ್ ಕುರಿತು ಮಾಹಿತಿಯನ್ನು ಪಡೆದು ಕ್ರಮಕೈಗೊಳ್ಳಲಾಗುತ್ತಿದೆ.
5. ಹೊಸ ಮಾದರಿಯ ಆನ್‌ಲೈನ್, ಸೈಬರ್ ವಂಚನೆಗಳ ತ್ವರಿತ ಮತ್ತು ತಾರ್ಕಿಕ ತನಿಖೆಯನ್ನು ಕೈಗೊಳ್ಳುವ ಸಲುವಾಗಿ ತನಿಖಾ ಕೈಪಿಡಿಯನ್ನು (New Cyber Investigation Manual ) ಪ್ರಕಟಿಸಲಾಗಿದೆ.
6. ಸಿ.ಐ.ಡಿ ಘಟಕದಲ್ಲಿರುವ Cyber Forensic Cell ನಿಂದ ಪ್ರತಿ ವರ್ಷವು ಸುಮಾರು 1500 ಸೈಬರ್ ಅಪರಾಧ ಪ್ರಕರಣಗಳಿಗೆ ವೈಜ್ಞಾನಿಕ ವರದಿಗಳನ್ನು ನೀಡಲಾಗುತ್ತಿದೆ.
7. ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸರ್ಕಾರವು ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಎಫ್.ಎಂ, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಎಲ್ಲಾ ಮಾಧ್ಯಮಗಳ ಮುಖಾಂತರ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿರುತ್ತದೆ.
8. ಪ್ರಮುಖ ಮೊಬೈಲ್ ಸರ್ವೀಸ್ ಪ್ರೊವೈಡರ್‌ಗಳ ಮುಖಾಂತರ ಕರೆಗಳು ಸ್ವೀಕರಿಸುವ ಮೊದಲು ಸೈಬರ್ ಅಪರಾಧಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ.

9. ಹ್ಯಾಕಿಂಗ್ ಹಾಗೂ ಇತರೆ ಸೈಬರ್ ಅಪರಾಧ ಪ್ರಕರಣಗಳನ್ನು ಪತ್ತೆ ಹಚ್ಚಲು Drone Forensics, RAID Forensics, Wearable device forensics, Cloud forensics, Crypto Currency Tracing and Investigation ನಂತಹ ಸುಧಾರಿತ ತರಬೇತಿಗಳನ್ನು ಹಾಗೂ ಅಧುನಿಕ ವಿದ್ಯುನ್ಮಾನ ತಾಂತ್ರಿಕ ಉಪಕರಣಗಳನ್ನು ಬಳಸಲು ಅಧಿಕಾರಿ/ಸಿಬ್ಬಂದಿಗಳಿಗೆ ವಿಶೇಷ ತರಬೇತಿಗಳನ್ನು ಸಹ ನೀಡಲಾಗುತ್ತಿರುತ್ತದೆ.

10. ಸೈಬರ್ ಅಪರಾಧಗಳನ್ನು ನಿಯಂತ್ರಿಸಲು ಸಾರ್ವಜನಿಕರಲ್ಲಿ ಮ್ಯೂಲ್ ಅಕೌಂಟ್ ಪರಿಣಾಮಗಳ ಬಗ್ಗೆ ಕಾನೂನು ಕ್ರಮಗಳ ಕುರಿತಂತೆ ಜಾಗೃತಿ ಮೂಡಿಸಲಾಗುತ್ತಿದೆ.

11. ಸಾಮಾಜಿಕ ಜಾಲತಾಣಗಳಾದ ವಾಟ್ಸ್ಆಪ್, ಫೇಸ್‌ಬುಕ್, ಟ್ವಿಟರ್, ಇನ್‌ಸ್ಟಾಗ್ರಾಮ್, ಟೆಲಿಗ್ರಾಂ ಹಾಗೂ ಇತರೆ ಜಾಲತಾಣಗಳಲ್ಲಿ ಐಟಿ ಕಾಯ್ದೆ ಮತ್ತು ಐಟಿ ನಿಯಮಗಳನ್ನು ಉಲ್ಲಂಘಿಸುವ ಮತ್ತು ಸೈಬರ್ ಅಪರಾಧದಲ್ಲಿ ಭಾಗಿಯಾಗಿರುವ/ಭಾಗಿಯಾಗಬಹುದಾದ ಪೋಸ್ಟ್‌ಗಳನ್ನು ನಿಯಮಾನುಸಾರ ನೋಟೀಸ್ ಜಾರಿ ಮಾಡಿ ಜಾಲತಾಣದಿಂದ ತೆಗೆದು ಹಾಕುವ ಕ್ರಮಗಳನ್ನು ಕೇಂದ್ರ ಮತ್ತು ರಾಜ್ಯದ ಸಹಭಾಗಿತ್ವ ಸಂಸ್ಥೆಗಳ ಸಮನ್ವಯದೊಂದಿಗೆ ಕೈಗೊಳ್ಳಲಾಗುತ್ತಿದೆ.

12. ಸರ್ಕಾರದ ಆದೇಶದ ಮೇರೆಗೆ 08 ಸೈಬರ್ ಸೆಕ್ಯೂರಿಟಿ ಅನಾಲಿಸ್ಟ್ ಹಾಗೂ 08 ಡಿಜಿಟಲ್ ಫಾರೆನ್ಸಿಕ್ ಅನಾಲಿಸ್ಟ್ ಒಟ್ಟು 16 ಸೈಬರ್ ತಾಂತ್ರಿಕ ತಜ್ಞರನ್ನು ಹೊರಗುತ್ತಿಗೆ ಆಧಾರದ ಮೇರೆಗೆ ನಿಯೋಜಿಸಲು ಆದೇಶ ನೀಡಲಾಗಿರುತ್ತದೆ.

13. ಅದರಲ್ಲಿ 06 ಡಿಜಿಟಲ್ ಫಾರೆನ್ಸಿಕ್ ಅನಾಲಿಸ್ಟ್ ಹುದ್ದೆಗೆ 02 ಸೈಬರ್ ಸೆಕ್ಯೂರಿಟಿ ಅನಾಲಿಸ್ಟ್ ಹುದ್ದೆಗೆ ಒಟ್ಟು 08 ತಾಂತ್ರಿಕ ತಜ್ಞರನ್ನು ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಘಟಕಕ್ಕೆ ನೇಮಕ ಮಾಡಲಾಗಿರುತ್ತದೆ.

**ಸಂಖ್ಯೆ: HD 63 PCQ 2025**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು